ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/05/ಇಎಪಿ/2023

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001,
ದಿನಾಂಕ: 02-12-2023.

## ಜ್ಞಾಪನ

ವಿಷಯ: 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಪರೀಕ್ಷಾ ಶುಲ್ಕ ಪಾವತಿಸಲು ಕಾಲಾವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/05/ಇಎಪಿ/2023, ದಿ: 18-08-2023.
2.ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/05/ಇಎಪಿ/2023, ದಿ:27-11-2023.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರ ಸುತ್ತೋಲೆಯಲ್ಲಿ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ವಿವಿಧ ಹಂತಗಳಲ್ಲಿ ಪಾವತಿಸುವ ಬಗ್ಗೆ ದಿನಾಂಕಗಳನ್ನು ನಿಗಧಿಪಡಿಸಿ ಮಾಹಿತಿಯನ್ನು ನೀಡಲಾಗಿತ್ತು.

ಉಲ್ಲೇಖ(2)ರ ಸುತ್ತೋಲೆಯಲ್ಲಿ 2009-2010 ರಿಂದ 2014-15 ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ರಿಂದ 2015-16ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಸಿ-09 ಪಠ್ಯಕ್ರಮದಲ್ಲಿ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಮತ್ತು 2016-17 ಹಾಗೂ 2017-18 ನೇ ಶೈಕ್ಷಣಿಕ ಸಾಲಿನಲ್ಲಿ ಸಿ-15 ಪಠ್ಯಕ್ರಮದಲ್ಲಿ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸಿ ಪರೀಕ್ಷಾ ಶುಲ್ಕ ಪಾವತಿಸಿ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗಿತ್ತು.

ಪ್ರಸ್ತುತ ಹಲವಾರು ಸಂಸ್ಥೆಯ ಪ್ರಾಚಾರ್ಯರು/ಪೋಷಕರು/ವಿದ್ಯಾರ್ಥಿಗಳು ಕಾರಣಾಂತರಗಳಿಂದ ಸಕಾಲದಲ್ಲಿ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗಿರುವುದಿಲ್ಲ. ಅದಕಾರಣ, ಪರೀಕ್ಷಾ ಶುಲ್ಕ ಪಾವತಿಸುವ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ.

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಪರೀಕ್ಷಾ ಶುಲ್ಕ ಪಾವತಿಸಲು ಈ ಕೆಳಕಂಡಂತೆ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ. ಇದರ ನಂತರ ಯಾವುದೇ ಕಾರಣಕ್ಕೂ ಪರೀಕ್ಷೆಗೆ ಪರೀಕ್ಷಾ ಶುಲ್ಕ ಪಾವತಿಸಲು ಅವಧಿಯನ್ನು ವಿಸ್ತರಿಸಲಾಗುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

1. 2009-2010 ರಿಂದ 2014-15 ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ರಿಂದ 2015-16ನೇ ಸಾಲಿನವರೆಗೆ ವಿವಿಧ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಸಿ-09 ಪಠ್ಯಕ್ರಮದಲ್ಲಿ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಮತ್ತು 2016-17 ಹಾಗೂ 2017-18 ನೇ ಶೈಕ್ಷಣಿಕ ಸಾಲಿನಲ್ಲಿ ಸಿ-15 ಪಠ್ಯಕ್ರಮದಲ್ಲಿ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ದಂಡ ರಹಿತವಾಗಿ ಕೊನೆಯ ದಿನಾಂಕ:06-12-2023.

2. ಕ್ರಮಸಂಖ್ಯೆ 1 ರಲ್ಲಿನ ಸಿ-15 ಪಠ್ಯಕ್ರಮದ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಸಿ-15 ಪಠ್ಯಕ್ರಮದ ರೆಗ್ಯೂಲರ್ ಹಾಗೂ ಲ್ಯಾಟರಲ್ ಎಂಟ್ರಿ ಅಭ್ಯರ್ಥಿಗಳು ಮತ್ತು ಸಿ-03 ಹಾಗೂ ಸಿ-20 ಪಠ್ಯಕ್ರಮದ ಅಭ್ಯರ್ಥಿಗಳು ಪ್ರತಿ ಸೆಮಿಸ್ಟರ್ ಗೆ 2000/-ರೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:06-12-2023.

ಸದರಿ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು/ಪೋಷಕರು/ಸಿಬ್ಬಂದಿಯವರ ಗಮನಕ್ಕೆ ತರುವಂತೆ ಮತ್ತು ವಿದ್ಯಾರ್ಥಿಗಳು ಶುಲ್ಕ ಪಾವತಿಸಲು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

ಕಾರ್ಯದರ್ಶಿ

ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ: ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ ಮತ್ತು ಸ್ಥಳೀಯ ವೃತ್ತ ಪತ್ರಿಕೆಗಳಲ್ಲಿ ಪ್ರಚುರಪಡಿಸಲು.

ಪ್ರತಿ:

1. ಆಪ್ತಶಾಖೆ, ಮಾನ್ಯ ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಆಪ್ತಶಾಖೆ, ಮಾನ್ಯ ನಿರ್ದೇಶಕರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಇ-ಗವರ್ನೆನ್ಸ್ ವಿಭಾಗ - ವೆಬ್ ಸೈಟ್ ನಲ್ಲಿ ಪ್ರಕಟಿಸಲು
4. ಇ.ಸಿ.ಎಸ್.ವಿಭಾಗ.